ಜಾವೇದ್ ಅಖ್ತರ್ ಹಾಡು ಇಷ್ಟ. ಹಿಂದಿ ಸಿನಿಮಾ ರಿಚ್ ಆಗಲಿಕ್ಕೆ ಉರ್ದು ಸಾಂಗುಗಳೇ ಕಾರಣ. ಪ್ರತಿಹಾಡಿನ ಮೀನಿಂಗನ್ನ ಧ್ಯಾನಿಸ್ತೀನಿ. 'ತೇರಾ ಮೇರಾ ಪ್ಯಾರ್ ಅಮರ್, ಫಿರ್ ಕ್ಯೂ ಮುಝುಕೊ ಲಗತಾ ಹೈ ಡರ್.' ಇಲ್ಲಿ ಇಂಟೆನ್ಸಿಟಿ ಆಫ್ ಲವ್ ಅದೆಯಲ್ಲ, ಅದನ್ನ ಕನ್ನಡದೊಳಗೆ ಹೇಳಾಕ ಬರೋದಿಲ್ಲ. ಸಾಹಿರ್ ಈಜ್ ಗ್ರೇಟ್.

◆ **ಓದುಗರ ಜತೆ ನಿಮ್ಮ ಅನುಭವ ಎಂಥದು?**

ಬಜಾರಿಗೆ ಹೋದರೆ, ಕಾಯಿಪಲ್ಲೆ ಮಾರೋಳು ಹಸೀನಾ ಅನ್ನೋವಾಕಿ, 'ಬಾಯಾರೆ, ಹೊಸ ಪುಸ್ತಕ ಇದ್ದರೆ ಕೊಡ್ರೀ' ಅಂತಾಳ. ಆಕೀದು ಎಸ್ಸೆಸ್ಸೆಲ್ಸಿ ಆಗ್ಯಾದ. ನನ್ನೆಲ್ಲ ಪುಸ್ತಕ ಓದ್ಯಾಳ. 'ಲೇ, ಹಿಡಕೊಂಡ ತಪ್ಪಡಿ ಇಳಸೋಕೆ ಟೈಮಿಲ್ಲ ನಿನಗ. ಯಾವಾಗ ಓದ್ತೀಯೇ?' ಅಂದರ, 'ರಾತ್ರಿ ಓದ್ತೀನ್ರಿ' ಅಂತಾಳ. ಇದು ಒಬ್ಬ ರೈಟರಿಗೆ ಸಿಗೋ ನಿಜವಾದ ಬಹುಮಾನ. ಮತ್ತೊಬ್ಬ ರೈತ ಅಣ್ಣಿಗೇರಿಯಂವ, ನನ್ನ ದೊಡ್ಡ ಫ್ಯಾನ್. ಫೋನು ಮಾಡ್ತಾನ, ಯಾವುದಾದರೂ ಪುಸ್ತಕ ಬಂದರೆ ಹೇಳ್ರಿ, ತರಸ್ಕೋತೀನಿ ಅಂತ. ಹಗರಿಬೊಮ್ಮನಹಳ್ಳಿ ಎಕ್ಸ್ ಎಂಎಲ್ಎ ಒಬ್ಬರು 'ಖಲೀಲ್ ಗಿಬ್ರಾನ್' ಪುಸ್ತಕ ಓದಿ ಒಂತಾಸು ಮಾತಾಡಿದರು. ಮಂದಿಗೆ ಮುಟ್ಟೈತೊ ಇಲ್ರೀ ನನ್ನ ರೈಟಿಂಗು? ಹಂಗ ನೋಡಿದರೆ, ಯೂನಿವರ್ಸಿಟಿ ಹುಡುಗರೇ ಪುಸ್ತಕ ಓದಂಗಿಲ್ಲ.

◆ **ನಿಮ್ಮ ಬರೆಹದಲ್ಲಿ ಮೃತ್ಯುಪ್ರಜ್ಞೆ ಮತ್ತೆಮತ್ತೆ ಬರುತ್ತೆ.**

ಬಿಕಾಸ್, ಡೆತ್ ಈಜ್ ರಿಲಿಫ್, ಹ್ಯಾಫಿನೆಸ್. ನಮಗ ಇಬ್ರಿಗೂ ಅನ್ ಕಂಟ್ರೋಲ್ಡ್ ಡಯಾಬಿಟಿಸ್ ಅದ. ಏನೈತರಿ ಈ ದರಿದ್ರ ಬಾಡಿಯೊಳಗ. ಆದರೆ, ಸೌಲ್ ಈಸ್ ಲೈಫ್. ನಮ್ಮಪ್ಪಯ್ಯ ಸತ್ತಾಗ ಅವನ ಮಾರಿ ಇಷ್ಟು ಶಾಂತ ಇತ್ತರಿ. ಡೆತ್ತನ್ನು ನಾವು ಕಣ್ಣಾರೆ ನೋಡೀವಿ. ಅಪ್ಪಯ್ಯನಿಗೆ ಅನ್ನನಾಳದ ಕ್ಯಾನ್ಸರ್ ಆಗಿತ್ತು—ಕರದ ಎಣ್ಣಿಯೊಳಗ ಕೆಲಸ ಮಾಡಿಮಾಡಿ. 'ಅರವತ್ತು ವರ್ಷ ಬದುಕೀನಿ. ಈಗ ಸಾಯ್ತೀನಿ ಅಂತ ವಿಚಾರ ಮಾಡಬ್ಯಾಡ್ರಿ' ಅನ್ನೋರು. ವೆನ್ ಐ ವಾಜ್ ಆನ್ ಡೆತ್‌ಬೆಡ್, ಆತು ಇನ್ನು ದಾಟಿಹೋಗ್ತೀನಿ. ಎರಡಕ್ಷರ ಬರೆಯೋಣ ಅಂತ ಶುರುಮಾಡಿದೆ. ಸಾವು ಇವತ್ತೇ ಬರಲಿ. ಮಕ್ಕಳಿಲ್ಲ ಮರಿಲ್ಲ. ಅದಕ್ಯಾಕ ಚಿಂತೆ? ಅಕ್ಸೆಪ್ಟಿಂಗ್ ಡೆತ್ ಈಸ್ ಲವ್ ಆಫ್ ಲೈಫ್. ಟ್ರೂತ್ ಆಫ್ ಲೈಫ್. ಯಾರಾದರೂ ಸತ್ತರೆ ನಾನು ಭಾಳ ಅಳೋಕೆ ಹೋಗಲ್ಲ. ಯಪ್ಪಾ, ಪಾರು ಮಾಡಿದೆಯಲ್ಲಪ್ಪ ಇವರನ್ನ ಅಂತೀನಿ. ಇದು ನಮ್ಮ ನಿಮ್ಮ ಕೊನೀ ಭೆಟ್ಟಿ ಆಗಬಹುದು, ಯಾರಿಗ್ಗೊತ್ತು? ಆದರೆ, ಲೈಫ್ ಈಜ್ ಬ್ಯೂಟಿಫುಲ್. ವೆದರ್ ಐ ಮೇಬಿ ಹಿಯರ್ ಆರ್ ನಾಟ್, ಲೈಫ್ ಈಜ್ ಗೋಯಿಂಗ್ ಆನ್.

### ರಹಮತ್ ತರೀಕೆರೆ

ಚಿಕ್ಕಮಗಳೂರು ಜಿಲ್ಲೆಯ ತರೀಕೆರೆಯವರು. ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಸಾಹಿತ್ಯ ಅಧ್ಯಯನ ವಿಭಾಗದಲ್ಲಿ ಪ್ರಾಧ್ಯಾಪಕರಾಗಿದ್ದರು. ಸಾಹಿತ್ಯ ವಿಮರ್ಶೆ, ಸಂಶೋಧನೆ, ಪ್ರವಾಸ ಕಥನ, ವಿಚಾರ ಸಾಹಿತ್ಯ, ಜೀವನ ಚರಿತ್ರೆ, ಸಾಹಿತ್ಯ ಮೀಮಾಂಸೆ ಪ್ರಕಾರಗಳಲ್ಲಿ ಪುಸ್ತಕಗಳನ್ನು ಬರೆದಿದ್ದಾರೆ. 'ಪ್ರತಿಸಂಸ್ಕೃತಿ', 'ಮರದೊಳಗಣ ಕಿಚ್ಚು', 'ಅಂಡಮಾನ್ ಕನಸು', 'ಕತ್ತಿಯಂಚಿನ ದಾರಿ', 'ಲೋಕವಿರೋಧಿಗಳ ಜೊತೆಯಲ್ಲಿ', 'ಅಮೀರ್‌ಬಾಯಿ ಕರ್ನಾಟಕಿ', 'ನಡೆದಷ್ಟೂ ನಾಡು', 'ಕರ್ನಾಟಕ ನಾಥಪಂಥ', 'ಕರ್ನಾಟಕದ ಸೂಫಿಗಳು', 'ಕರ್ನಾಟಕ ಗುರುಪಂಥ' 'ಹಾಸು ಹೊಕ್ಕು' ಅವರ ಪ್ರಮುಖ ಪುಸ್ತಕಗಳು. ಅವರ ಲಲಿತ ಪ್ರಬಂಧಗಳ ಸಂಕಲನ 'ಹಿತ್ತಲ ಜಗತ್ತು'.